ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಮೇ 02, 2020**

## ಪತ್ರಿಕಾ ಪ್ರಕಟಣೆ

**ವಲಸೆ ಕಾರ್ಮಿಕರ ಕುರಿತು ಒಡಿಶಾ ಮುಖ್ಯಮಂತ್ರಿಗಳೊಂದಿಗೆ ಮುಖ್ಯಮಂತ್ರಿ ಬಿಎಸ್ ವೈ ಚರ್ಚೆ**

ಬೆಂಗಳೂರು, 02 ಮೇ 2020 (ಕರ್ನಾಟಕ ವಾರ್ತೆ): ಕರ್ನಾಟಕದಲ್ಲಿ ನೆಲೆಸಿರುವ ಒಡಿಶಾ ರಾಜ್ಯದ ವಲಸೆ ಕಾರ್ಮಿಕರನ್ನು ಒಡಿಶಾಕ್ಕೆ ಕಳುಹಿಸುವ ಬಗ್ಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರೊಂದಿಗೆ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಹಾಗೂ ಒಡಿಶಾ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ಸಮಾಲೋಚನೆ ನಡೆಸಿದರು.

ರಾಜ್ಯದಲ್ಲಿ ಲಾಕ್ ಡೌನ್ ಸಂದರ್ಭದಲ್ಲಿ ವಲಸೆ ಕಾರ್ಮಿಕರಿಗೆ ಎಲ್ಲ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆ. ಕಾರ್ಮಿಕರು ಹಸಿವಿನಿಂದ ಬಳಸದಂತೆ ಎಚ್ಚರ ವಹಿಸಲಾಗಿದೆ.

ಪ್ರಸ್ತುತ ಕೇಂದ್ರ ಸರ್ಕಾರದ ಮಾರ್ಗಸೂಚಿಗಳಂತೆ ವಿವಿಧ ವಲಯಗಳಲ್ಲಿ ಆರ್ಥಿಕ ಚಟುವಟಿಕೆಗಳನ್ನು ಮರು ಪ್ರಾರಂಭ ಮಾಡಲಾಗುತ್ತಿದೆ. ಇದರಿಂದ ಬಹುತೇಕ ಕಾರ್ಮಿಕರಿಗೆ ಮತ್ತೆ ಉದ್ಯೋಗ ದೊರೆಯಲಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಹೊರ ರಾಜ್ಯಗಳಿಗೆ ಕಾರ್ಮಿಕರನ್ನು ಕಳುಹಿಸುವ ಕುರಿತು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಅವರು ಒಡಿಶಾದ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ಸಮನ್ವಯ ನಿರ್ವಹಿಸುವರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಒಡಿಶಾ ರಾಜ್ಯಕ್ಕೆ ಹಿಂತಿರುಗುವ ಕಾರ್ಮಿಕರ ವಿವರ, ಅವರ ಆರೋಗ್ಯ ತಪಾಸಣೆ ಹಾಗೂ ಅವರ ಕ್ವಾರಂಟೈನ್ ವ್ಯವಸ್ಥೆ ಮತ್ತಿತರ ವಿಷಯಗಳ ಕುರಿತು ಚರ್ಚಿಸಲಾಯಿತು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್, ಒಡಿಶಾ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## *ಕೋವಿಡ್ 19 ನಿಯಂತ್ರಣ ಹಾಗೂ ಲಾಕ್ ಡೌನ್ ವಿಷಯಗಳ ಕುರಿತು ಮುಖ್ಯಮಂತ್ರಿಯವರು ಜಿಲ್ಲಾಧಿಕಾರಿಗಳೊಂದಿಗೆ ನಡೆಸಿದ ವಿಡಿಯೋ ಕಾನ್ಫರೆನ್ಸ್ ಮುಖ್ಯಾಂಶಗಳು*

ಬೆಂಗಳೂರು, 02 ಮೇ 2020 (ಕರ್ನಾಟಕ ವಾರ್ತೆ):

1. ಕೇಂದ್ರ ಸರ್ಕಾರದ ಮಾರ್ಗಸೂಚಿಗಳಂತೆ ಆರ್ಥಿಕ ಚಟುವಟಿಕೆಗಳನ್ನು ಪ್ರಾರಂಭಿಸುವಂತೆ ಸೂಚಿಸಲಾಯಿತು.

2. ಕಂಟೇನ್ ಮೆಂಟ್ ಝೋನ್ ಹೊರತು ಪಡಿಸಿ ಇತರ ಕಡೆಗಳಲ್ಲಿ ಕೇಂದ್ರ ಸರ್ಕಾರ ಅನುಮತಿ ನೀಡಿರುವ ಚಟುವಟಿಕೆಗಳನ್ನು ಪ್ರಾರಂಭಿಸುವಂತೆ ತಿಳಿಸಲಾಯಿತು.

3. ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಆಹಾರ ಧಾನ್ಯಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡುವ ಕುರಿತು ಕ್ರಮ ವಹಿಸಲು ಸೂಚಿಸಲಾಯಿತು.

4. ರಾಜ್ಯದ ವಿವಿಧ ಜಿಲ್ಲೆಗಳಿಗೆ ತೆರಳ ಬಯಸಿರುವ ವಲಸೆ ಕಾರ್ಮಿಕರಿಗೆ ಕೆ ಎಸ್ ಆರ್ ಟಿ ಸಿ ಬಸ್ ಗಳಲ್ಲಿ ಒನ್ ವೇ ದರ ಪಾವತಿಸಿ ಪ್ರಯಾಣಿಸಲು ಅವಕಾಶ ಕಲ್ಪಿಸಲು ತೀರ್ಮಾನಿಸಲಾಯಿತು. ಹೊರ ಜಿಲ್ಲೆಗಳಿಂದ ಆಗಮಿಸಿದವರನ್ನು ಸಾಂಸ್ಥಿಕ ಕ್ವಾರಂಟೈನ್ ಮಾಡುವಂತೆ ತಿಳಿಸಲಾಯಿತು.

5. ಲಾಕ್ ಡೌನ್ ಸಂದರ್ಭದಲ್ಲಿ ಬೇರೆ ಊರಿನಲ್ಲಿ ಸಿಲುಕಿಕೊಂಡವರು ತಮ್ಮ ಊರಿಗೆ ಅಥವಾ ಕೆಲಸದ ಸ್ಥಳಗಳಿಗೆ ಹಿಂತಿರುಗಲು ಒಂದು ದಿನಕ್ಕೆ, ಒಂದು ಬಾರಿಗೆ ಪ್ರಯಾಣಿಸಲು ಅಂತರ್ ಜಿಲ್ಲಾ ಪ್ರಯಾಣಕ್ಕೆ ಪಾಸ್ ನೀಡಲು ತೀರ್ಮಾನಿಸಲಾಯಿತು.

6. ನೇಕಾರರ ಸಮಸ್ಯೆಗಳನ್ನು ಪರಿಹರಿಸುವ ಕುರಿತು ಪ್ರತ್ಯೇಕ ಸಭೆ ಕರೆದು ಚರ್ಚಿಸಲಾಗುವುದು.

7. ವಿಜಯಪುರ, ಬೆಳಗಾವಿ, ಬಾಗಲಕೋಟೆ, ಮೈಸೂರು, ದಕ್ಷಿಣ ಕನ್ನಡ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕಲಬುರಗಿ ಜಿಲ್ಲೆಗಳ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಲಾಯಿತು.

## ಸಚಿವರ ಪ್ರವಾಸ

ಬೆಂಗಳೂರು, 02 ಮೇ 2020 (ಕರ್ನಾಟಕ ವಾರ್ತೆ):ಮಾನ್ಯ ನಗರಭಿವೃದ್ಧಿ ಸಚಿವರಾದ ಬಿ.ಎ.ಬಸವರಾಜ ಅವರು ಮೇ 04 ರಂದು ಶಿವಮೊಗ್ಗ ಜಿಲ್ಲೆಗೆ ಪ್ರವಾಸ ಕೈಗೊಳ್ಳಲಿದ್ದು ಅಂದು ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯ ಅಭಿವೃದ್ಧಿ ಕಾರ್ಯಗಳ ಪ್ರಗತಿ ಪರಿಶೀಲನಾ ಸಭೆ, ಸ್ಮಾರ್ಟ್ ಸಿಟಿ ಹಾಗೂ ಶಿವಮೊಗ್ಗ-

ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ಅಭಿವೃದ್ಧಿ ಕಾರ್ಯಗಳ ಪ್ರಗತಿ ಪರಿಶೀಲನಾ ಸಭೆ ಭಾಗವಹಿಸುವುವರು.

ಮೇ 05 ರಂದು ದಾಣವಗೆರೆ ಜಿಲ್ಲೆಯ ಪ್ರವಾಸ ಕೈಗೊಂಡು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಸಭೆ ಭಾಗವಹಿಸಿ ನಂತರ ಅಂದು ಸಂಜೆ ಬೆಂಗಳೂರು ನಗರಕ್ಕೆ ಹಿಂತಿರುಗುವರು ಎಂದು ಪ್ರಕಟಣೆ ತಿಳಿಸಿದೆ.

## ರಾಜಸ್ಥಾನ ವಲಸೆ ಕಾರ್ಮಿಕರಿಗಾಗಿ ಪ್ರಯಾಣಿಸಲು ಅನುಕೂಲಕ್ಕಾಗಿ ಆನ್ ಲೈನ್ ಸೇವೆ ಕಲ್ಪಿಸಲಾಗಿದೆ

ಬೆಂಗಳೂರು, 02 ಮೇ 2020 (ಕರ್ನಾಟಕ ವಾರ್ತೆ): ಕೋವಿಡ್-19 ಹಿನ್ನಲೆಯಲ್ಲಿ ಲಾಕ್ ಡೌನ್ ನಿಂದಾಗಿ ನಮ್ಮ ರಾಜ್ಯದಿಂದ ರಾಜಸ್ಥಾನ ರಾಜ್ಯಕ್ಕೆ ಹೋಗುವವರು ಹಾಗೂ ರಾಜಸ್ಥಾನ ರಾಜ್ಯದಿಂದ ನಮ್ಮ ರಾಜ್ಯಕ್ಕೆ ಬರುವವರು ಅಂದರೆ ತಾತ್ಕಾಲಿಕ ಶಿಬಿರಗಳಲ್ಲಿ ಸಿಕ್ಕಿಕೊಂಡಿರುವ ವಲಸೆ ಕಾರ್ಮಿಕರು ಯಾತ್ರಿಕರು, ಪ್ರವಾಸಿಗರು, ವಿದ್ಯಾರ್ಥಿಗಳು ಅತೀ ತುರ್ತು/ಅವಶ್ಯಕತೆ ಇರುವವರಿಗೆ ಮಾತ್ರ ಪರಿಶೀಲಿಸಿ ಸರಕಾರವು ವಿಧಿಸಿರುವ ಎಲ್ಲಾ ಷರತ್ತುಗಳಿಗೊಳಪಟ್ಟು ಪ್ರಯಾಣ ಮಾಡುವ ಅವಕಾಶಕ್ಕೆ ದಿನಾಂಕ:01-05-2020 ರಂದು ಸರ್ಕಾರ ಆದೇಶ ನೀಡಿದೆ.

ಪ್ರಯಾಣಿಸುವವರು ಆನ್ ಲೈನ್ ಮೂಲಕ https://sevasindhu.karnataka.gov.in ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದ್ದು, ರಾಜಸ್ಥಾನ ರಾಜ್ಯಕ್ಕೆ ಸಂಬಂಧಪಟ್ಟಂತೆ ಹೆಚ್ಚಿನ ಮಾಹಿತಿಗೆ ಕಾಲ್ ಸೆಂಟರ್ ಸಂಖ್ಯೆ:080-23118888 ಅನ್ನು ಸಂಪರ್ಕಿಸಲು ಪ್ರಕಟಣೆ ಕೋರಿದೆ.

## ಮೈಸೂರು ಚಾಮರಾಜೇಂದ್ರ ಮೃಗಾಲಯದ ಪ್ರಾಣಿ ಹಾಗೂ ಪಕ್ಷಿಗಳ ದತ್ತು ಸ್ವೀಕಾರ

ಬೆಂಗಳೂರು, 02 ಮೇ 2020 (ಕರ್ನಾಟಕ ವಾರ್ತೆ): ಮೈಸೂರು ಮೃಗಾಲಯದ "ಪ್ರಾಣಿಗಳ ದತ್ತು ಸ್ವೀಕಾರ ಯೋಜನೆ" ಅಡಿಯಲ್ಲಿ ಮುಂಬೈನ ನಿವಾಸಿಗಳಾದ ಕುಲ್‌ದೀಪ್ ಸಿಕರ್ಬಾರ ಅವರು ಸ್ಪಾಟ್ ಬಿಲ್ಡ್ ಪೆಲೆಕನ್ ಮತ್ತು ಬ್ಲಾಕ್ ನೆಕ್ಡ್ ಸ್ವಾನ್ ಹಾಗೂ ವಿಜೇಶ್ ಷಾ ಅವರು ಲವ್ ಬರ್ಡ್, ನಾಗರ ಹಾವು ಮತ್ತು ಕಾಳಿಂಗ ಸರ್ಪವನ್ನು ಅದೇ ರೀತಿ ಬೆಂಗಳೂರಿನ ನಿವಾಸಿಗಳಾದ ಸುಧಾ. ಆರ್ ಮತ್ತು ಶಾಂತ ಎಸ್.ಆರ್ ಅವರು ಕಾಳಿಂಗ ಸರ್ಪಗಳನ್ನು ನಾಗರ ಹಾವುಗಳನ್ನು 2021ರ ಮಾರ್ಚ್‌ವರೆಗೆ ದತ್ತನ್ನು ಪಡೆಯಲಾಗಿದೆ.

ಬೆಂಗಳೂರು ನಗರದ ನಿವಾಸಿಗಳಾದ ಸ್ನೇಹ ಮಂಜುನಾಥ್ ಅವರು ಬಿಳಿ-ನವಿಲು ಹಾಗೂ ಸುರೇಶ್. ಎಸ್ ಅವರು ನಾಗರ ಹಾವು ಮತ್ತು ಸುಬ್ಬಯ್ಯ ಪೊನ್ನಣ್ಣ. ಬಿ ಅವರು ಇಂಡಿಯನ್ ಗ್ರೇ ವುಲ್ಫ್‌ನ್ನು ನಿಗಧಿಪಡಿಸಿರುವ ಶುಲ್ಕವನ್ನು ಪಾವತಿಸಿ 2021ರ ಏಪ್ರಿಲ್ ಅವಧಿಯವರೆಗೆ ದತ್ತು ಪಡೆದಿದ್ದಾರೆ ಎಂದು ವ್ಯವಸ್ಥಾಪಕ ನಿದೇಶಕರು ಚಾಮರಾಜೇಂದ್ರ ಮೃಗಾಲಯ ಮೈಸೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## " ಸರ್ಕಾರಿ ಇಲಾಖೆಗಳಲ್ಲೇ ಕನ್ನಡ ಕಡೆಗಣನೆ: ಟಿ.ಎಸ್.ನಾಗಾಭರಣ ಬೇಸರ"

ಬೆಂಗಳೂರು, 02 ಮೇ 2020 (ಕರ್ನಾಟಕ ವಾರ್ತೆ): ಆಡಳಿತದ ಎಲ್ಲಾ ಹಂತದಲ್ಲಿ ಪರಿಪೂರ್ಣವಾಗಿ ಕನ್ನಡ ಬಳಕೆಯಾಗಬೇಕು ಎನ್ನುವುದು ಸರ್ಕಾರದ ಆಶಯವಾಗಿದ್ದರೂ ಸರ್ಕಾರಿ ಇಲಾಖೆಗಳೇ ಕನ್ನಡ ಅನುಷ್ಠಾನವನ್ನು ಗಾಳಿಗೆ ತೂರಿರುವುದು ಸರಿಯಾದ ಕ್ರಮವಲ್ಲ ಎಂದು ಕನ್ನಡ **ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್. ನಾಗಾಭರಣ** ಅವರು ಬೇಸರ ವ್ಯಕ್ತಪಡಿಸಿದ್ದಾರೆ.

ಕಳೆದ 2 ತಿಂಗಳಿಂದ ಆಡಳಿತದ ಕೇಂದ್ರಸ್ಥಾನವಾದ ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಲವು ಹಿರಿಯ ಮತ್ತು ಕಿರಿಯ ಅಧಿಕಾರಿಗಳು ಆಂಗ್ಲಭಾಷೆಯಲ್ಲಿ ಸುತ್ತೋಲೆ, ಆದೇಶಗಳನ್ನು ಹೊರಡಿಸಿದ್ದಾರೆ. ಅಲ್ಲದೆ ಬಿಬಿಎಂಪಿ, ಪೊಲೀಸ್ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಸಾರಿಗೆ ಇಲಾಖೆ, ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆ, ವಿಶೇಷವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸೇರಿದಂತೆ ಹಲವು ಇಲಾಖೆಗಳು ಸರ್ಕಾರದ ಕನ್ನಡ ಅನುಷ್ಠಾನದ ಆದೇಶವನ್ನು ಗಾಳಿಗೆ ತೂರಿದ್ದು, ಈ ಬಗ್ಗೆ ಅಧಿಕಾರಿಗಳಿಗೆ ಮತ್ತು ಇಲಾಖೆಗಳಿಗೆ ನಿರ್ದೇಶನ ನೀಡುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಬರೆದಿರುವ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಜನಸಾಮಾನ್ಯರಿಗೆ ಅರ್ಥವಾಗುವಂತೆ ಕನ್ನಡದಲ್ಲಿ ವ್ಯವಹರಿಸುವ ಮತ್ತು ಪತ್ರವ್ಯವಹಾರ ನಡೆಸುವುದು ಇಲಾಖಾ ಮುಖ್ಯಸ್ಥರ ಜವಾಬ್ದಾರಿಯಾಗಿದೆ. ಆದಾಗ್ಯೂ ತಮ್ಮ ಜವಾಬ್ದಾರಿ ಮರೆತು ಕನ್ನಡ ಭಾಷಾ ಅನುಷ್ಠಾನ ನೀತಿಯನ್ನು ಅನುಸರಿಸದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಬರೆದಿರುವ ಪತ್ರದಲ್ಲಿ ಸೂಚಿಸಿದ್ದಾರೆ.

ಎಂತಹ ಕಠಿಣ ಪರಿಸ್ಥಿತಿಯಲ್ಲೂ ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಬೇಕು. ಆಡಳಿತದ ಎಲ್ಲ ಹಂತದಲ್ಲೂ ಶೇ. 100ಕ್ಕೆ 100ರಷ್ಟು ಕನ್ನಡ ಅನುಷ್ಠಾನವಾಗಬೇಕು ಎಂದಿರುವ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು, ಆಡಳಿತದ ದೈನಂದಿನ ವ್ಯವಹಾರಗಳಲ್ಲಿ ನೆರೆರಾಜ್ಯಗಳಾದ ಕೇರಳ, ತಮಿಳುನಾಡು, ಆಂಧ್ರಪ್ರದೇಶ ಹಾಗೂ ಮಹಾರಾಷ್ಟ್ರ ಆಯಾ ರಾಜ್ಯಭಾಷೆಯಲ್ಲಿಯೇ ಆಡಳಿತ ನಡೆಸಲು ಸಾಧ್ಯವಾಗಿದ್ದು, ಕರ್ನಾಟಕದಲ್ಲಿ ಇದು ನಿಯಮ ಜಾರಿ ಮಾಡಲು ಸಾಧ್ಯವಾಗುವುದಿಲ್ಲವೇ ಎಂದು ಪ್ರಶ್ನಿಸಿರುವ ನಾಗಾಭರಣ ಅವರು, ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳು ಮನಸ್ಸು ಮಾಡಿದರೆ ಕನ್ನಡ ಅನುಷ್ಠಾನ ಕೆಲಸ ಕಷ್ಟವೇನಲ್ಲ. ಇದರಲ್ಲಿ ಬಹುಮುಖ್ಯವಾಗಿ ಅಧಿಕಾರಿಗಳ ಇಚ್ಛಾಶಕ್ತಿ ಮುಖ್ಯವಾಗಿದ್ದು, ಅಧಿಕಾರಿಗಳು ಭಾಷಾಭಿಮಾನ ಬೆಳೆಸಿಕೊಂಡು ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದ್ದಾರೆ.

## ಉಳ್ಳವರು ಇಲ್ಲದವರಿಗೆ ಸಕಾಲಿಕ ನೆರವು ಕಲ್ಪಿಸುವುದೇ ನಿಜವಾದ  ಮಾನವ ಧರ್ಮ : ವಿ ಆರ್ ಗೌರಿಶಂಕರ್

ಬೆಂಗಳೂರು, ಮೇ 2 ( ಕರ್ನಾಟಕ ವಾರ್ತೆ ) :

ಜನ ಸೇವೆಯೇ ಜನಾರ್ಧನನ ಸೇವೆ ! ಉಳ್ಳವರು ಇಲ್ಲದವರಿಗೆ ಸಕಾಲದಲ್ಲಿ ನೆರವು ಕಲ್ಪಿಸಬೇಕು !! ಅದುವೇ ನಿಜವಾದ ಮಾನವ ಧರ್ಮ !! ಎಂದು ಶ್ರೀ ಶೃಂಗೇರಿ ಶಾರದಾ ಪೀಠದ ಆಡಳಿತಾಧಿಕಾರಿ ಹಾಗೂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ ವಿ ಆರ್ ಗೌರಿ ಶಂಕರ್ ಅವರು ಇಲ್ಲಿ ಇಂದು ತಿಳಿಸಿದರು.

ನಗರದ ಶಂಕರಪುರಂ ಬಡಾವಣೆಯ ಶೃಂಗೇರಿ ಶಂಕರ ಮಠದ ಆವರಣದಲ್ಲಿ ಆಯೋಜಿಸಲಾಗಿದ್ದ ವಿಶೇಷ ಕಾರ್ಯಕ್ರಮದಲ್ಲಿ ಬಸವನಗುಡಿ ಪ್ರದೇಶದಲ್ಲಿ ವಾಸಿಸುತ್ತಿರುವ ಕಡು ಬಡವರು ಹಾಗೂ ಇದೇ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೋವಿಡ್-19 ಸೈನಿಕರು ಎಂದೇ ಬಣ್ಣಿಸಲಾಗುವ ಅರೆ ವೈದ್ಯಕೀಯ ಸಿಬ್ಬಂದಿ, ಪೌರ ಕಾರ್ಮಿಕರು ಹಾಗೂ ಪೊಲೀಸರಿಗೆ ಧವಸ-ಧಾನ್ಯಗಳ ಆಹಾರ ಕಿಟ್ ವಿತರಿಸಿ ಔಪಚಾರಿಕವಾಗಿ ಅವರು ಮಾತನಾಡುತ್ತಿದ್ದರು.

ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ನಿಯಮ ಪಾಲಿಸಿ ಇಂದು ಒಂದು ಸಾವಿರ ಮಂದಿಗೆ ಆಹಾರ ಕಿಟ್‌ಗಳನ್ನು ವಿತರಿಸಿದ್ದೇವೆ. ಮುಂದಿನ ಮೂರು ದಿನಗಳಲ್ಲಿ ಅರ್ಹರ ಮನೆ-ಮನೆಗೇ ತೆರಳಿ ಐದು ಸಾವಿರ ಆಹಾರ ಕಿಟ್‌ಗಳನ್ನು ವಿತರಿಸಲು ಸಂಕಲ್ಪ ಮಾಡಿದ್ದೇವೆ ಎಂದು ಹೇಳಿದ ಅವರು ಸಮಯಕ್ಕಾದವನೇ ನೆಂಟ ಎಂದು ಬಣ್ಣಿಸುತ್ತಾರೆ. ಬಡವರು ಸಂಕಷ್ಟದಲ್ಲಿ ಸಿಲುಕಿರುವಾಗ ಸಹೃದಯರ ಸಹಕಾರದಿಂದ ಶ್ರೀ ಮಠವು ಈ ಪವಿತ್ರ ಕಾರ್ಯಕ್ಕೆ ಮುಂದಾಗಿದೆ. ಯಾವುದೇ ಜಾತಿ-ಮತ, ಬೇಧ-ಭಾವ ಅಥವಾ ತಾರತಮ್ಯ ಇಲ್ಲದೇ ಈ ಕಾರ್ಯವನ್ನು ಸಾಕಾರಗೊಳಿಸಲು ಯೋಜಿಸಲಾಗಿದೆ ಎಂದರು.

ಶ್ರೀ ಮಠದ ಭಕ್ತಾಧಿಗಳೂ ಹಾಗೂ ಮಹಾ ದಾನಿಗಳೂ ಅದ ಟಿ ಸಿ ವೆಂಕಟೇಶ್, ಬಿ ಎಸ್ ಕಿರಣ್ ಕುಮಾರ್, ಎನ್ ನಿರಂಜನ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**ಛಾಯಾಚಿತ್ರ ಲಗತ್ತಿಸಿದೆ)**

# ನೀರಿನ ಬಿಲ್ ಪಾವತಿ ಹಾಗೂ ಕಾಲರಾ ತಡೆಗಟ್ಟುಲು ಕ್ರಮ – ಬೆಂಗಳೂರು ಜಲಮಂಡಳಿ

*****

ಬೆಂಗಳೂರು, ಮೇ 2 ( ಕರ್ನಾಟಕ ವಾರ್ತೆ ) : ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ. **ಕಾಲರಾ ಮತ್ತು ಜಿ.ಇ**. ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಿಂದ ದಿನಾಂಕ 01.04.2020 ರಿಂದ 01.05.2020 ರವರೆಗೆ ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗುತ್ತಿದ್ದು ದಿನಾಂಕ 01.04.2020 ರಿಂದ 01.05.2020 ರವರೆಗೆ ದಾಖಲುಗೊಂಡ ಒಟ್ಟು 68 ನೀರಿನ ಮಾದರಿಯನ್ನು ಸಂಗ್ರಹಿಸಿದ್ದು, 48 ಮಾದರಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, **ಎಲ್ಲಾ 46 ಮಾದರಿಯ ಫಲಿತಾಂಶವು ಕುಡಿಯಲು ಯೋಗ್ಯವಾಗಿರುತ್ತದೆ**. 02 ಮಾದರಿಗಳ ಫಲಿತಾಂಶವು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 20 ಮಾದರಿಗಳಿಗೆ ಸಂಬಂಧಿಸಿದ ಪ್ರದೇಶಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

ನಗರದಲ್ಲಿ ಕೋವಿಡ್ –19 ಹರಡುತ್ತಿರುವ ಹಿನ್ನೆಲೆಯಲ್ಲಿ ಅಂತರ ಕಾಯ್ದುಕೊಳ್ಳಬೇಕಾಗಿರುವ ಕಾರಣ ಜಲಮಂಡಳಿಯ ಮಾಪನ ಓದುಗರು ಮನೆಮನೆಗೆ ತೆರಳಿ ನೀರಿನ ಬಿಲ್‌ಅನ್ನು ವಿತರಿಸಲು ಸಾಧ್ಯವಾಗದಿರುವುದರಿಂದ ನೀರಿನ ಬಿಲ್‌ನ ಮಾಹಿತಿಯನ್ನು ಜಲಮಂಡಳಿಯಲ್ಲಿ ಲಭ್ಯವಿರುವ ಗ್ರಾಹಕರ ಮೊಬೈಲ್ ನಂಬರ್‌ಗಳಿಗೆ ವಾಚನ ದಿನವಹಿ ಎಸ್.ಎಂ.ಎಸ್.ಮುಖಾಂತರ ಕಳುಹಿಸಲಾಗುತ್ತಿದ್ದು, ಎಸ್.ಎಂ.ಎಸ್.ನಲ್ಲಿರುವ ಲಿಂಕ್ ಮುಖಾಂತರ ನೀರಿನ ಬಿಲ್‌ಅನ್ನು ಪಾವತಿಸಬಹುದಾಗಿರುತ್ತದೆ.

ಗ್ರಾಹಕರು ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ತಮ್ಮ ಹೆಸರು, ಆರ್.ಆರ್. ಸಂಖ್ಯೆ ಮತ್ತು ಮೊಬೈಲ್ ಸಂಖ್ಯೆ ಯನ್ನು ಕಳುಹಿಸಿ ನೋಂದಾಯಿಸಿಕೊಂಡಲ್ಲಿ ನೀರಿನ ಬಿಲ್ಲಿನ ವಿವರವನ್ನು ತಮ್ಮ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ಕಳುಹಿಸಲಾಗುವುದು.

ಇದಲ್ಲದೆ ಜಲಮಂಡಳಿಯ ಅಧಿಕೃತ ವೆಬ್‌ಸೈಟ್ : www.bwssb.gov.in ನಲ್ಲಿ ಎಲ್ಲಾ ಗ್ರಾಹಕರ ಬಿಲ್‌ಗಳನ್ನು ವಾಚನ ದಿನವಹಿ ಪ್ರಕಟಿಸಲಾಗುತ್ತಿದ್ದು, ನೀರಿನ ಬಿಲ್ ಪಾವತಿಯನ್ನು ಮಂಡಳಿಯ ವೆಬ್‌ಸೈಟ್ ಹಾಗೂ ಆನ್‌ಲೈನ್ ಪೇಮೆಂಟ್ ಸೇವೆಗಳಾದ BBPS(Bharat Bill Payment System)ನಿಂದ ಲಭ್ಯವಿರುವ Paytm, Phone-Pe, Google Pay, ಮುಖಾಂತರವಾಗಿಯೂ ಮಾಡಬಹುದಾಗಿರುತ್ತದೆ. ಗ್ರಾಹಕರು ಇದರ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ಸಹಾಯವಾಣಿಯ ಸಂಖ್ಯೆ:22238888 ಹಾಗೂ 1916 ಮತ್ತು ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ತಮ್ಮ ಸಮೀಪದ ಸೇವಾಠಾಣೆಯ ದೂರವಾಣಿ ಸಂಖ್ಯೆಯನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್: www.bwssb.gov.in ನಲ್ಲಿ ಪಡೆಯಬಹುದಾಗಿರುತ್ತದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## Payment of water bills and Steps taken to prevent Cholera

****

Bangalore, May 02 (Karnataka Information) : BWSSB immediately take action to stop the leakage as soon as water leakages are detected and reported from public or from staff of BWSSB. Adding to this, if contamination of water is detected it is taken care that contaminated water does not get in contact to the water supply pipe lines. BWSSB collected address of the cases reported about Cholera and GE from Health & Family Welfare Department, Government Epidemic Disease Hospital, Bangalore, 01.04.2020 to 01.05.2020 tested the samples and results of the samples are enclosed with this letter. The abstract of the result is as mentioned below.

Among the 68 cases reported from 01.04.2020 to 01.05.2020, samples from 48areas were collected and result of **all 46 samples were obtained as suitable for potable purpose(SPP**). Result of 02 samples are awaiting. The areas of remaining 20 cases does not comes under BWSSB limits.

Since COVID-19 is spreading in the city rapidly, in the view of maintaining social distance, BWSSB's meter reader cannot issue the bill by taking meter reading from each house. Water bill details are being sent through SMS reading day wise for the mobile numbers of customers that are available in the Board and payment can be made by clicking on the link provided in the SMS.

All customers are requested to register the details by sending their name, R.R. Number and mobile number to 24/7 BWSSB call center whatsapp number :8762228888 and thus water bill details will be sent to their registered mobile number through SMS

Along with this, water bills of all consumers are being published reading day wise in BWSSB official website: www.bwssb.gov.in and payment can be made through the website. Payment can also be made through online services of BBPS (Bharath Bill Payment System) like Paytm, Phone pe, Google pay etc.

It is also informed that BWSSB Call center number 080-22238888 is available 24/7 to receive the complaint of customers. Along with this, whatsapp number:8762228888 and toll free number 1916 is also available. Service station address and contact details can be obtained through BWSSB official **web site :www.bwssb.gov.in .** said Public Relation Officer, BWSSB

## ಅನಿವಾಸಿ ಕನ್ನಡಿಗರೊಂದಿಗೆ ಆನ್‌ಲೈನ್ ಸಂವಾದ: ವಿಶ್ವದ 38 ದೇಶಗಳ 125 ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗಿ

**ಬೆಂಗಳೂರು, ಮೇ 2 ( ಕರ್ನಾಟಕ ವಾರ್ತೆ ) :** ಸಾಗರೋತ್ತರ ದೇಶಗಳಲ್ಲಿ ನೆಲೆಸಿ ಬದುಕನ್ನು ಕಟ್ಟಿಕೊಂಡಿರುವ ಅನಿವಾಸಿ ಕನ್ನಡಿಗರೊಂದಿಗೆ ಕೊರೊನಾ ಲಾಕ್‌ಡೌನ್ ಹಿನ್ನಲೆಯಲ್ಲಿ ಸಂಕಷ್ಟಕ್ಕೊಳಗಾದ ಜನರ ಸಮಸ್ಯೆಗಳನ್ನು ಸುಧೀರ್ಘವಾಗಿ ಆಲಿಸಿ ಸಮಸ್ಯೆಗಳಿಗೆ ಶೀಘ್ರವಾಗಿ ಪರಿಹಾರ ಕಂಡುಕೊಳ್ಳುವುದಾಗಿ ಮಾನ್ಯ ಪ್ರವಾಸೋದ್ಯಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಸಿ.ಟಿ. ರವಿ ರವರು ಸ್ವಯಂ ಗೃಹ ಕ್ವಾರಂಟೈನ್ ನಲ್ಲಿದ್ದು ಆನ್‌ಲೈನ್ ಸಂವಾದದಲ್ಲಿ ಭರವಸೆ ನೀಡಿದರು.

ಇಂದು ಅವರು ಕುಮಾರ ಕೃಪಾ ಅತಿಥಿಗೃಹದಲ್ಲಿ ಕನ್ನಡಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅನಿವಾಸಿ ಕನ್ನಡಿಗರಿಗೆ ಆಯೋಜಿಸಲಾಗಿದ್ದ ಆನ್‌ಲೈನ್ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇಂದು ನಡೆದ 3 ಗಂಟೆಗಳ ಸುಧೀರ್ಘ ಆನ್‌ಲೈನ್ ಸಂವಾದದಲ್ಲಿ ವಿಶ್ವದ ಸುಮಾರು 38 ದೇಶಗಳ 125ಕ್ಕೂ ಹೆಚ್ಚು ಅನಿವಾಸಿ ಕನ್ನಡಿಗರು/ ಕನ್ನಡ ಸಂಘಗಳ ಪ್ರತಿನಿಧಿಗಳು ಭಾಗವಹಿಸಿ ಕೊರೊನಾ ಸಂಕಷ್ಟಕ್ಕೆ ಸಿಲುಕಿದ ಕನ್ನಡಿಗರ ಸಮಸ್ಯೆಗಳನ್ನು ಮನನ ಮಾಡಿದರು. ಈ ಸಮಸ್ಯೆಗಳಿಗೆ ಸ್ಪಂದಿಸಿದ ಸಚಿವರು, ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಗಳೊಡನೆ ಚರ್ಚಿಸಿ, ಅನಿವಾಸಿ ಕನ್ನಡಿಗರೊಡನೆ ನೇರಸಂಪರ್ಕ ಸಾಧಿಸಲು ಸಾಧ್ಯವಾಗುವಂತೆ ಶೀಘ್ರದಲ್ಲಿಯೇ ಸಹಾಯವಾಣಿ ಕೇಂದ್ರವನ್ನು ವಿಧಾನಸೌಧದಲ್ಲಿ ತೆರೆಯುವುದರ ಜೊತೆಗೆ ನೋಡಲ್ ಅಧಿಕಾರಿಯನ್ನು ನೇಮಿಸಲು ಕ್ರಮವಹಿಸುವುದಾಗಿ ಭರವಸೆ ನೀಡಿದರು.

ಗಲ್ಫ್ ದೇಶಗಳಲ್ಲಿ ನೆಲೆಸಿರುವಅನಿವಾಸಿ ಕನ್ನಡಿಗರಲ್ಲಿ ಬಹುಸಂಖ್ಯೆಯ ಕಾರ್ಮಿಕ ವರ್ಗದವರಾಗಿದ್ದು ಕೊರೊನಾದಿಂದಾಗಿ ಕೆಲಸ ಕಳೆದುಕೊಂಡವರು, ಗರ್ಭಿಣಿಯರು, ಹಿರಿಯ ನಾಗರೀಕರು, ವಿದ್ಯಾರ್ಥಿಗಳು ಕೊರೊನ ಸಂಕಷ್ಟಕ್ಕೆ ಸಿಲುಕಿದ್ದು, ಬಹುತೇಕ ಕಾರ್ಮಿಕರು ವೇತನವಿಲ್ಲದೇ ಸಂಕಷ್ಟಕ್ಕೆ ಒಳಗಾಗಿದ್ದಾರೆ. ವೈದ್ಯಕೀಯ ವೆಚ್ಚ ದುಬಾರಿಯಾಗಿರುವ ಹಿನ್ನಲೆಯಲ್ಲಿ ಕರ್ನಾಟಕಕ್ಕೆ ವಾಪಾಸ್ಸಾಗಲು ತುದಿಗಾಲಿನಲ್ಲಿ ನಿಂತಿದ್ದಾರೆ. ಪ್ರವಾಸಿ ವೀಸಾದಲ್ಲಿ ತೆರಳಿರುವ ಪ್ರವಾಸಿಗರು ವಾಪಾಸ್ಸಾಗುವ ಇರಾದೆ ಇದ್ದರೂ ಕೊರೊನಾದಿಂದಾಗಿ ಮರಳಲೂ ಆಗದೇ ಅಲ್ಲಿಯೇ ಉಳಿಯಲೂ ಆಗದೇ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಇವರನ್ನು ವಾಪಾಸ್ಸು ಕರೆಸಿಕೊಳ್ಳುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ವಿದೇಶಿ ಮಂತ್ರಾಲಯ ಹಾಗೂ ಭಾರತೀಯ ರಾಯಭಾರಿ ಕಛೇರಿಯ ಅಧಿಕಾರಿಗಳೊಡನೆ ಸಂಪರ್ಕ ಸಾಧಿಸಿ ವ್ಯವಸ್ಥೆ ಕಲ್ಪಿಸುವ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದ ಸಚಿವರ ಸಂಕಷ್ಟಕ್ಕೀಡಾದ ಅನಿವಾಸಿ ಕನ್ನಡಿಗರು ಭಾರತೀಯ ಯೋಗಕ್ಷೇಮ ಸಮುದಾಯ ನಿಧಿಯಿಂದ ನೆರವು ಪಡೆಯಲು ಭಾರತೀಯ ರಾಯಭಾರಿ ಕಛೇರಿಯ ಸಂಪರ್ಕ ಹೊಂದಿರುವಂತೆ ಸಲಹೆ ಮಾಡಿದರು. ಹೊರದೇಶದಲ್ಲಿ ನೆಲೆಸಿರುವ ಅನಿವಾಸಿ ಕನ್ನಡಿಗರನ್ನು ಕರೆಸಿಕೊಳ್ಳುವುದು ಸಾಹಸವೇ ಸರಿ. ಸಣ್ಣ ಮೈಮರೆವು ದೊಡ್ಡ ದುರಂತಕ್ಕೆ ಕಾರಣವಾಗಬಹುದು ಎನ್ನುವುದನ್ನು ಮನಸ್ಸಿನಲ್ಲಿಟ್ಟುಕೊಂಡು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ವ್ಯವಸ್ಥೆ ಕಲ್ಪಿಸಲಾಗುವುದು. ಭಾರತ ಹೆಮ್ಮೆ ಪಡುವಂತೆ ಸಾಧ್ಯವಾಗುವ ರೀತಿಯಲ್ಲಿ ಎಲ್ಲಾ ಸಮಸ್ಯೆಗಳನ್ನು ತೀವ್ರವಾಗಿ ಪರಿಹರಿಸುವುದಾಗಿ ಭರವಸೆ ನೀಡಿದರು. ಸಂಕಷ್ಟದಲ್ಲಿರುವ ಕನ್ನಡಿಗರ ನೆರವಿಗೆ ರಾಜ್ಯ ಸರ್ಕಾರ ಸದಾ ನಿಮ್ಮೊಂದಿಗಿದೆ, ಕೊರೊನಾವನ್ನು ನಿಯಂತ್ರಿಸಲು ನಾವು ನೀವೆಲ್ಲರೂ ಒಂದಾಗಿ ಕೆಲಸ ಮಾಡುವ ಮನೋಭೂಮಿಕೆಯನ್ನು ಬೆಳಸಿಕೊಳ್ಳೋಣ ಎಂದರು.

ಕನ್ನಡಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್. ನಾಗಾಭರಣ, ಪ್ರವಾಸೋದ್ಯಮ ಇಲಾಖೆಯ ನೋಡಲ್ ಅಧಿಕಾರಿ ರತ್ನಾಕರ್‌ರವರು ಸಂವಾದದಲ್ಲಿ ಪಾಲ್ಗೊಂಡಿದ್ದರು,

**ಛಾಯಾಚಿತ್ರ ಲಗತ್ತಿಸಿದೆ)**